ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

ಅ) ಲೋಕೋಪಯೋಗಿ ಇಲಾಖೆಯಡಿ ರಸ್ತೆ ಮತ್ತು ಸೇತುವೆ ಕಾಮಗಾರಿಗಳಿಗೆ 96-97 97-98 ಹಾಗೂ 98-99 ಸಾಲಿನಲ್ಲಿ ಮಂಜೂರಾತಿ ದೊರೆತಿದ್ದು, ಸದರಿ ಕಾಮಗಾರಿಗಳ ಕ್ಷೇತ್ರವಾರು ಸಂಕ್ಷಿಪ್ತ ವಿವರಗಳನ್ನು ಅನಬಂಧ 'ಅ'ನಲ್ಲಿ ನೀಡಿದೆ. (ಪ್ರಶ್ನೆ ಸಂಖ್ಯೆ 4029ಕ್ಕೆ ನೀಡಿದೆ)

ಇ) ದಾವಣಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ ದಾವಣಗೆರೆ ಶಾಂತಿಸಾಗರ ರಸ್ತೆಯು ಭಾಗಶಃ ಆರ್.ಐ.ಡಿ.ಎಫ್-2 ರಡಿ ಮಂಜೂರಾಗಿದೆ. ಹಾಗೂ ಆರ್.ಐ.ಡಿ.ಎಫ್-4 ರಡಿ ಸರ್ಕಾರವು 35.00 ಲಕ್ಷ ರೂ.ಗಳ ಮೊತ್ತದಲ್ಲಿ ದಾವಣಗೆರೆ ಮಲ್ಲಗೊಂಡನ ಹಳ್ಳಿ ರಸ್ತೆಯ ಒಂದು ಕಾಮಗಾರಿಯನ್ನು ಗುರುತಿಸಿದೆ.

ದಾವಣಗೆರೆಯಲ್ಲಿ ಜಿಲ್ಲಾ ನ್ಯಾಯಲಯ ಪ್ರಾರಂಭ.

2896:(4019)

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ (ದಾವಣಗೆರೆ): ಮಾನ್ಯ ಕಾನೂನು ಸಂಸದೀಯ ವ್ಯವಹಾರ ಶಾಸನ ರಚನೆ ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಾವಣಗೆರೆ ಜಿಲ್ಲಾ ನ್ಯಾಯಾಲಯವಿಲ್ಲದೆ ದಾವಣಗೆರೆ ಜಿಲ್ಲಾ ಸೇರಿದ ಹರಪನಹಳ್ಳಿ ತಾಲ್ಲೂಕಿನ ಜನರು ಬಳ್ಳಾರಿಗೆ ಚೆನ್ನಗಿರಿ ಹೊನ್ನಾಳಿ ತಾಲ್ಲೂಕಿನ ಜನರು ಶಿವಮೊಗ್ಗಕ್ಕೆ ದಾವಣಗೆರೆ ಜಗಳೂರು ಮತ್ತು ಹರಿಹರ ತಾಲ್ಲೂಕಿನ ಜನರು ಚಿತ್ರದುರ್ಗಕ್ಕೆ ನ್ಯಾಯಾಲಯ ಕೆಲಸಗಳಿಗಾಗಿ ಹೋಗಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಅಲ್ಲಿ ಜಿಲ್ಲಾ ನ್ಯಾಯಾಲಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಇ) ಯಾವ ಯಾವ ನ್ಯಾಯಾಲಯಗಳನ್ನು ಪ್ರಾರಂಭಿಸಲಾಗುವುದು? (ವಿವರವಾಗಿ ತಿಳಿಸುವುದು)

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಸಚಿವರು):

ಅ) ಹೌದು.

ಆ) ದಾವಣಗೆರೆ ಜಿಲ್ಲೆಯೂ ಸೇರಿದಂತೆ (ಎಲ್ಲಾ 7 ಹೊಸ ಜಿಲ್ಲೆಗಳಿಗೆ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಶೀಘ್ರ ಪರಿಶೀಲನೆಯಲ್ಲಿದೆ. ಈ ನ್ಯಾಯಾಲಯಗಳಿಗೆ ಹುದ್ದೆಗಳನ್ನು ಸೃಜಿಸುವುದು ಒಳಗೊಂಡಂತೆ ಕಟ್ಟಡಗಳನ್ನು ಗುರ್ತಿಸುವುದು ಹಾಗೂ ನ್ಯಾಯಾಲಯಗಳನ್ನು ಸ್ಥಾಪಿಸಲು ಅವಶ್ಯವಾದ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಇ) ಹೊಸದಾಗಿ ಸೃಜಿಸಲಾಗಿರುವ ಏಳು ಹೊಸ ಜಿಲ್ಲೆಗಳಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಮಾತ್ರ ಸ್ಥಾಪಿಸಲಾಗುವುದು.

ದಾವಣಗೆರೆ ಜಿಲ್ಲೆಯಲ್ಲಿರುವ ಲೋಕೋಪಯೋಗಿ ರಸ್ತೆಗಳ ಅಭಿವೃದ್ಧಿ.

2897:(3950)

ಶ್ರೀ ಎಸ್.ಎಸ್.ಮಲ್ಲಿಕಾರ್ಜುನ (ದಾವಣಗೆರೆ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಾವಣಗೆರೆ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ರಸ್ತೆಗಳ ಸಂಖ್ಯೆ ಎಷ್ಟು (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

ಆ) ಈ ಜಿಲ್ಲೆಗೆ ಲೋಕೊಪಯೋಗಿ ಇಲಾಖೆಯಿಂದ ರಸ್ತೆ ಅಭಿವೃದ್ಧಿಗಾಗಿ ಕಳೆದ 4 ವರ್ಷಗಳಲ್ಲಿ ಬಿಡುಗಡೆಯಾದ ಹಣವೆಷ್ಟು? (ನೂತನ ದಾವಣಗೆರೆ ಜಿಲ್ಲೆಗೆ ಸೇರಿರುವ ತಾಲ್ಲೂಕುಗಳಿಗೆ ಈ ಹಿಂದಿನ ಜಿಲ್ಲೆಗಳಿಂದ ಬಿಡುಗಡೆಯಾಗಿರುವ ಹಣದ ವಿವರ ಒದಗಿಸುವುದು)

ಇ) ಲೋಕೋಪಯೋಗಿ ಇಲಾಖೆಯಿಂದ ಹಣ ಬಿಡುಗಡೆಯಾಗದೆ ದಾವಣಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ ರಸ್ತೆ ಪೂರ್ತಿ ಹಾಳಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ದಾವಣಗೆರೆ ವಿಧಾನ ಸಭಾ ಕ್ಷೇತ್ರದ ಲೋಕೋಪಯೋಗಿ ಇಲಾಖೆ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ಎಷ್ಟು ಹಣ ಬಿಡುಗಡೆ ಮಾಡುವುದು ಹಾಗೂ ಯಾವಾಗ ರಸ್ತೆ ಅಭಿವೃದ್ಧಿ ಕಾರ್ಯವನ್ನು ಪೂರ್ಣಗೊಳಿಸುವುದು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):

ಅ) ದಾವಣಗೆರೆ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ರಸ್ತೆಗಳ